# <u>ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ</u>

## <u>ಸಿ.ಸಿ. 486/2018</u>

<u>ಸಾಕ್ಷಿದಾರರ ಹೇಳಿಕೆಃ</u>

**ಹೆಸರು** : ಷಣ್ಮುಖಪ್ಪ ಚಾಸಾಃ **1** ಪ್ರಾಸಾಃ **1**

**ತಂದೆಯ ಹೆಸರು** : ವೀರಪ್ಪ

**ವಯಸ್ಸು** : 55 ವರ್ಷ

**ವೃತ್ತಿ** : ವ್ಯವಸಾಯ

**ವಾಸಸ್ಥಳ** : ಯಲೋದಹಳ್ಳಿ ಗ್ರಾಮ

ದಿನಾಂಕಃ **04-04-2024** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ</u>

ಮೃತ ಶ್ರೀನಿವಾಸ ನನ್ನ ಮಗ. ಚಾಸಾ-12 ನಮ್ಮ ಸಂಬಂಧಿಕರು. ಚಾಸಾ-5 ನನ್ನ ಮಗ. ಆರೋಪಿತರು ನನಗೆ ಗೊತ್ತಿಲ್ಲ. ಅಪಘಾತದಲ್ಲಿ ನನ್ನ ಮಗ ತೀರಿಕೊಂಡಿರುತ್ತಾನೆ ಮತ್ತು ಚಾಸಾ-12 ರವರಿಗೆ ಅಪಘಾತದಲ್ಲಿ ಪೆಟ್ಟು ಬಿದ್ದು ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತದೆ . ಆದರೆ ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಯಿತು ಎಂಬ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ 1 ದಾಖಲೆಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೇ ಎಂಬ ವಿಚಾರ ನನಗೆ ಗೊತ್ತಿಲ್ಲ .

ದೂರ ನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು, ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಮರುಹೇಳಿಕೆಯನ್ನು ನೀಡಿರುವುದಿಲ್ಲ.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

<u>ಪಾಟೀ ಸವಾಲು:- ಮಾನ್ಯ ಸ.ಸ.ಅ. ರವರಿಂದ:-</u>

ದಿಃ 11-03-2018 ರಂದು ಸಂಜೆ 5.15 ಗಂಟೆ ಸಮಯದಲ್ಲಿ ಹನುಮನಹಳ್ಳಿ ಬಸ್ ನಿಲ್ದಾಣದ ಕ್ರಾಸ್ ಹತ್ತಿರ ಕುಂದೂರು ಕಡೆಯಿಂದ ಹೊನ್ನಾಳಿ ಕಡೆಗೆ 1 ನೇ ಆರೋಪಿಯು ಕೆಎ-

-15 ಎ-1716 ಮಹೀಂದ್ರಾ ಬೊಲೆರೋ ಪಿಕಪ್ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು, ಚಾಸಾ-12 ರವರು ನನ್ನ ಮಗ ಮೃತ ಶ್ರೀನಿವಾಸನನ್ನು ಮೋಟಾರ್ ಸೈಕಲ್ ನಂ.ಕೆಎ-02-ಇಪಿ-9007 ರ ಹಿಂಬದಿಯಲ್ಲಿ ಕೂರಿಸಿಕೊಂಡು ಹೋಗುತ್ತಿದ್ದಾಗ, ಡಿಕ್ಕಿಪಡಿಸಿದ ಪರಿಣಾಮ ಚಾಸಾ-12 ಮತ್ತು ನನ್ನ ಮಗ ಶ್ರೀನಿವಾಸ ಬೈಕ್ ಸಮೇತ ಕೆಳಗೆ ಬಿದ್ದು, ಚಾಸಾ-12 ರವರಿಗೆ ಮುಖ ಕೈ ಕಾಲು ಮತ್ತು ಇತರಕಡೆಗಳಲ್ಲಿ ಪೆಟ್ಟು ಬಿದ್ದು ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ ಎಂದು ಮತ್ತು ನನ್ನ ಮಗ ಶ್ರೀನಿವಾಸನಿಗೆ ತಲೆಯ ಹಿಂಭಾಗ, ಹಣೆ, ಕೈ ಮತ್ತು ಕಾಲು ಇತರಕಡೆಗಳಲ್ಲಿ ಪೆಟ್ಟು ಬಿದ್ದು, ಗಾಯಗಳಾಗಿರುತ್ತವೆ ಎಂದು ನಿಪಿ-1 ರಂತೆ ಚಾಸಾ-16 ರವರು ಬರೆದುಕೊಟ್ಟ ಮೇರೆಗೆ ದೂರನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ 12-03-2018 ರಂದು ನನ್ನ ಮಗನ ಮೃತ ಶ್ರೀನಿವಾಸನನ್ನು 108 ಆಂಬುಲೆನ್ಸ್ ನಲ್ಲಿ ಹೊನ್ನಾಳಿ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿದ್ದಾಗ, ಮಾರ್ಗ ಮಧ್ಯದಲ್ಲಿ ಮೃತಪಟ್ಟಿದ್ದು ಮತ್ತು ಚಾಸಾ-12 ರವರಿಗೆ ಹೊನ್ನಾಳಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗೆ ಶಿವಮೊಗ್ಗ ಸಹ್ಯಾದ್ರಿ ನಾರಾಯಣ ಹೃದಯಲಾಯ ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದು, ಈ ಬಗ್ಗೆ ವಿಷಯ ತಿಳಿದ ನಾನು ಮತ್ತು ಇತರರು ಹೊನ್ನಾಳಿ ಸರ್ಕಾರಿ ಆಸ್ಪತ್ರೆಯ ಶವಗಾರಕ್ಕೆ ಹೋಗಿ ಮೃತ ದೇಹವನು ನೋಡಿ ಪೊಲೀಸರಿಗೆ ದೂರನ್ನು ಕೊಟ್ಟಿದ್ದು ಮತ್ತು ಅಪಘಾತವಾದ ಸ್ಥಳದಲ್ಲಿ ಇದ್ದ, ಚಾಸಾ-13 ರಿಂದ 15 ರವರು ಗಾಯಾಳುವನು ಉಪಚರಿಸಿ 108 ಆಂಬುಲೆನ್ಸ್ ನಲ್ಲಿ ಹೊನ್ನಾಳಿ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದರೆ ಎಂದು ಪೊಲೀಸರಿಗೆ ನಿಪಿ-2 ರಂತೆ ಮರುಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.